ಪ್ರೋಗ್ರಾಮಿಗೆ ಹೋಗಬೇಕಾಗಿದೆ ಅಲ್ಲಿಂದ ಒಂದ ತಕ್ಷಣ ಮಧ್ಯಾಹ್ನ 3 ಗಂಟೆಗೆ ಹೊಳಲ್ಕೆರೆ ಘಟನೆಯ ಬಗ್ಗೆ ಸಂಪೂರ್ಣವಾದ ಮಾಹಿತಿಯನ್ನು ಹೊಂದಿರುವ ಒಂದು ಹೇಳಿಕೆಯನ್ನು ಕೊಡುತ್ತೇನೆ.

ಶ್ರೀ ಪಿ. ರಮೇಶ್ :— ಮಾನ್ಯ ಅಧ್ಯಕ್ಷರೆ ನನಗೆ ಒಂದು ಸೆಕೆಂಡ್ ಅವಕಾಶವನ್ನು ಕೊಡಬೇಕು. ನಾನು ಆ ಕ್ಷೇತ್ರದ ಶಾಸಕ ಒಂದೆರಡು ವಿಚಾರಗಳನ್ನು ಹೇಳಬೇಕಾಗಿದೆ.

ಅಧ್ಯಕ್ಷರು :— ತಾವು ದಯವಿಟ್ಟು ಕುಳಿತುಕೊಳ್ಳಿ. ಪ್ರತಿಯೊಬ್ಬರೂ ಒಂದೊಂದು ಸೆಕೆಂಡ್ ಅಂತ ಎದ್ದರೆ ನಾನೇನು ಮಾಡಲಿ? ಇನ್ನು ಬೇಕಾದಷ್ಟು ಬಿಲ್‌ಗಳಿವೆ. ಇದೇನು ಜೀರೋ ಅವರ್ ಅಲ್ಲ.

ಶ್ರೀ ಎಂ. ಚಂದ್ರಪ್ಪ :— ಮಾನ್ಯ ಅಧ್ಯಕ್ಷರೆ, ಸಂಬಂಧಪಟ್ಟ ಕ್ಷೇತ್ರದ ಶಾಸಕರು ಅವರು ಏನು ಹೇಳುತ್ತಾರೆಂಬುದನ್ನು ತಾವು ಕೇಳಬೇಕಾಗುತ್ತದೆ.

ಅಧ್ಯಕ್ಷರು :— ಮಂತ್ರಿಗಳು ಸ್ಟೇಟ್‌ಮೆಂಟ್ ಮಾಡುತ್ತಾರೆ ಆಮೇಲೆ ಕ್ಲಾರಿಫಿಕೇಷನ್ ಕೇಳಿ.

## 3. ಶಾಸನ ರಚನೆ

ಎ) ವಿಧೇಯಕ ಮಂಡನೆ

(i) ಕರ್ನಾಟಕ ವಿಧಾನ ಮಂಡಲದವರ ವೇತನಗಳ, ನಿವೃತ್ತಿ ವೇತನಗಳ ಮತ್ತು ಭತ್ಯಗಳ (ತಿದ್ದುಪಡಿ) ವಿಧೇಯಕ, 2000.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :— ಮಾನ್ಯ ಅಧ್ಯಕ್ಷರೆ, 'ಕರ್ನಾಟಕ ವಿಧಾನ ಮಂಡಲದವರ ವೇತನಗಳ ನಿವೃತ್ತಿ ವೇತನಗಳ ಮತ್ತು ಭತ್ಯಗಳ (ತಿದ್ದುಪಡಿ) ವಿಧೇಯಕ, 2000' ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "ಕರ್ನಾಟಕ ವಿಧಾನ ಮಂಡಲದವರ ವೇತನಗಳ ನಿವೃತ್ತಿ ವೇತನಗಳ ಮತ್ತು ಭತ್ಯಗಳ (ತಿದ್ದುಪಡಿ) ವಿಧೇಯಕ, 2000. ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :— ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಮಂಡಲದವರ ವೇತನಗಳ ನಿವೃತ್ತಿ ವೇತನಗಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2000, ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ಅನುಬಂಧ I, II ವಿಧೇಯಕವನ್ನು ಮಂಡಿಸಲಾಗಿದೆ.

(ii) ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2000

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :— ಮಾನ್ಯ ಅಧ್ಯಕ್ಷರೆ, ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2000 ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2000 ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ. ಚಂದ್ರೇಗೌಡ :— ಮಾನ್ಯ ಅಧ್ಯಕ್ಷರೆ, ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2000 ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ಅನುಬಂಧ I, II ವಿಧೇಯಕವನ್ನು ಮಂಡಿಸಲಾಗಿದೆ.

ಬಿ. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(1) ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕ 2000.

+ ಶ್ರೀ ಎಂ. ಶಿವಣ್ಣ (ಆರ್ಥಿಕ ರಾಜ್ಯ ಸಚಿವರು) :— ಮಾನ್ಯ ಅಧ್ಯಕ್ಷರೆ, ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕ, 2000, ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎಂ. ಶಿವಣ್ಣ (ಆರ್ಥಿಕ ರಾಜ್ಯ ಸಚಿವರು) :— ಮಾನ್ಯ ಅಧ್ಯಕ್ಷರೆ, ಭಾರತೀಯ ರಿಸರ್ವ್ ಬ್ಯಾಂಕಿನ ವ್ಯಾಪ್ತಿಯಲ್ಲಿ ಬಂದಿರತಕ್ಕ ಹಣಕಾಸು ಸಂಸ್ಥೆಗಳು ಅನೇಕ ರೀತಿಯ ಠೇವಣಿಗಳನ್ನು ಆಹ್ವಾನಿಸಿ ಆಕರ್ಷಕ ಬಡ್ಡಿಯನ್ನು ಕೊಡುತ್ತೇವೆಂದು ಏನೆಲ್ಲ ಸೌಲಭ್ಯಗಳನ್ನು ಮಾಡಿಕೊಡುತ್ತೇವೆಂದು ತುಂಬಾ ಆಕರ್ಷಕವಾದ ಠೇವಣಿಗಳನ್ನು ಆಹ್ವಾನ ಮಾಡುತ್ತಾರೆ. ಈ ರೀತಿಯ ಆಹ್ವಾನಗಳು ಬಂದಂತಹ ಸಂದರ್ಭದಲ್ಲಿ ಜನರು ಠೇವಣಿಗಳನ್ನು ಇಡತಕ್ಕದ್ದನ್ನು ನಾವು ನೋಡಿದ್ದೇವೆ. ಅನೇಕ ರೀತಿಯಲ್ಲಿ ಭಾರಿ ಮೋಸವಾಗತಕ್ಕದ್ದು ಜಾಸ್ತಿ. ಇಂತಹ